# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 969
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 22.02.2024
4. ಉತ್ತರಿಸುವ ಸಚಿವರು : ಗೃಹ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ದಾಖಲಾದ ನಿಷೇಧಿತ ಡ್ರಗ್ಸ್ ಮಾರಾಟ ಪ್ರಕರಣಗಳು ಎಷ್ಟು; ಅವು ಯಾವುವು? ಈ ಪ್ರಕರಣಗಳಲ್ಲಿ ಬಂಧಿತರಾದ ದೇಶ ಮತ್ತು ವಿದೇಶ ಅಪರಾಧಿಗಳು ಎಷ್ಟು; ದಾಖಲಾದ ಪ್ರಕರಣಗಳು ಯಾವ ಹಂತದಲ್ಲಿದೆ; (ಸಂಪೂರ್ಣ ವಿವರ ನೀಡುವುದು)</td><td>ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರದ ಪೊಲೀಸ್ ಠಾಣೆಗಳಲ್ಲಿ ನಿಷೇಧಿತ ಡ್ರಗ್ಸ್ ಮಾರಾಟ ಕುರಿತಂತೆ, ದಾಖಲಾದ ಪ್ರಕರಣಗಳ ಅಂಕಿ ಅಂಶಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ.
<table>
<tr><th>ವರ್ಷ</th><th>ದಾಖಲಾದ ಮಾದಕ ವಸ್ತು ಮಾರಾಟ ಪ್ರಕರಣಗಳ ಅಂಕಿ ಅಂಶಗಳು</th><th>ಬಂದಿತರಾದ ಭಾರತೀಯರು</th><th>ಬಂಧಿತರಾದ ವಿದೇಶಿಯರು</th></tr>
<tr><td>2021</td><td>696</td><td>998</td><td>181</td></tr>
<tr><td>2022</td><td>579</td><td>855</td><td>112</td></tr>
<tr><td>2023</td><td>677</td><td>885</td><td>91</td></tr>
</table>
ಮೇಲ್ಕಂಡ ಪ್ರಕರಣಗಳ ಸಂಪೂರ್ಣ ವಿವರಗಳನ್ನು ಅನುಬಂಧ–1ರಲ್ಲಿರಿಸಿದೆ.</td></tr>
<tr><td>ಆ)</td><td>ನಿಷೇಧಿತ ಡ್ರಗ್ಸ್ ಮಾರಾಟ ಪ್ರಕರಣಗಳಲ್ಲಿ ಅತಿ ಹೆಚ್ಚು ವಿದೇಶದಿಂದ ಭಾರತಕ್ಕೆ ಶಿಕ್ಷಣ ಮತ್ತು ಉದ್ಯೋಗಕ್ಕೆಂದು ಅರಸಿ ಬಂದ ಜನರೇ ಭಾಗಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರುಗಳ ವಿರುದ್ಧ ಕೈಗೊಂಡ ಕ್ರಮಗಳೇನು; ಇವರ ವಿರುದ್ಧ ದಾಖಲಾದ ಪ್ರಕರಣಗಳ ಕುರಿತು ಮಾಹಿತಿಯನ್ನು ನೀಡುವುದು; ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು;</td><td>ಅಕ್ರಮ ಮಾದಕ ವಸ್ತುಗಳ ಮಾರಾಟ ಜಾಲದಲ್ಲಿ ತೊಡಗಿರುವ ವಿದೇಶಿಯರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ವಿದೇಶಿಯರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಅಂಕಿ ಅಂಶಗಳ ವಿವರಗಳನ್ನು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ವಿದೇಶಿಯರ ವಿರುದ್ಧ ದಾಖಲಾದ ಮಾದಕ ವಸ್ತು ಪ್ರಕರಣಗಳ ಅಂಕಿ ಅಂಶಗಳ ವಿವರ</th><th>ಬಂಧಿಸಲಾದ ವಿದೇಶಿಯರ ಸಂಖ್ಯೆ.</th></tr>
<tr><td>2021</td><td>140</td><td>181</td></tr>
<tr><td>2022</td><td>91</td><td>112</td></tr>
<tr><td>2023</td><td>76</td><td>91</td></tr>
</table>
<u>ಇಂತಹ ಪ್ರಕರಣಗಳು ಮರುಕಳಿಸದಂತೆ ಕೈಗೊಳ್ಳಲಾದ ಕ್ರಮಗಳ ವಿವರಗಳು ಈ ಕೆಳಕಂಡಂತಿದೆ.</u><br>
➢ ಬೆಂಗಳೂರು ನಗರ ಪೊಲೀಸರು ಮೇಲಿಂದ ಮೇಲೆ ವಿದೇಶಿಯರ ನೆಲೆಗಳ ಮೇಲೆ ದಾಳಿಗಳನ್ನು ಕೈಗೊಂಡು ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದ ವಿದೇಶಿಯರ ಮೇಲೆ ಪ್ರಕರಣ ದಾಖಲು ಮಡುವುದಲ್ಲದೆ ವೀಸಾ ಮತ್ತು ಪಾಸ್‌ಪೋರ್ಟ್ ಅವಧಿ ಮುಗಿದ ವಿದೇಶಿಯರನ್ನು ಅವರ ದೇಶಕ್ಕೆ ಕಳುಹಿಸಲು ಡಿಟೆನ್ಷನ್ ಸೆಂಟರ್‌ಗಳಲ್ಲಿ ಸೇರಿಸಲಾಗುತ್ತಿದೆ. ಎಫ್.ಆರ್.ಆರ್.ಓ. ರವರ ಮೂಲಕ ಸದರಿಯವರ ದೇಶಕ್ಕೆ ವಾಪಸ್ಸು ಕಳುಹಿಸಲು ಕ್ರಮ ಕೈಗೊಳ್ಳಲಾಗಿದೆ.<br>
➢ ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆ ನೀಡುವ ಮಾಲೀಕರುಗಳಿಗೆ ಸದರಿಯವರುಗಳ ಮಾಹಿತಿಯನ್ನು ಕಡ್ಡಾಯವಾಗಿ ಸರಹದ್ದಿನ ಪೊಲೀಸ್ ಠಾಣೆಗಳಿಗೆ ನೀಡಲು ಸೂಚಿಸಿ ಕ್ರಮಕೈಗೊಳ್ಳಲಾಗಿದೆ.<br>
➢ ಸಾರ್ವಜನಿಕರಿಂದ ಮಾದಕ ವಸ್ತುಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ಸಂಗ್ರಹಿಸಲು ಟೋಲ್ ಫ್ರೀ ಸಂಖ್ಯೆ: 1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆ ಪ್ರಾರಂಭಿಸಲಾಗಿದೆ.</td></tr>
</table>

- ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಮಾದಕ ವಸ್ತುಗಳ ಮಾರಾಟ/ಸೇವನೆಯ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ, ಸದರಿ ಪ್ರಕರಣಗಳಲ್ಲಿ ಭಾಗಿಯಾದ ವಿದೇಶಿಯರಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿದೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.
- ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸೂತ್ತೋಲೆಗಳನ್ನು ಹೊರಡಿಸಲಾಗಿದೆ.
- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್.1985ರ ಕಾಯ್ದೆಯನ್ವಯ ಪ್ರಕರಣಗಳಲ್ಲಿ ಭಾಗಿಯಾದ ಮೂರು ಜನ ವಿದೇಶೀಯರ ವಿರುದ್ಧ PIT-NDPS (The Prevention of Illicit Traffic in Narcotic Drugs and Psychotropic Substances Act), 1988 ಕಾಯ್ದೆಯಡಿಯಲ್ಲಿ ಬಂಧನದ ಆದೇಶ ಹೊರಡಿಸಲಾಗಿದೆ.
- ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.
- ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಿಗೆ ಭೇಟಿ ನೀಡಿ, ಅರಿವು ಮೂಡಿಸುವ ಜಾಗೃತಿ ಕಾರ್ಯಕ್ರಮ ಮತ್ತು ವಿದೇಶಿ ಪ್ರಜೆಗಳ ಸಭೆ ನಡೆಸಿ ಇಂತಹ ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗದಂತೆ ಎಚ್ಚರಿಕೆ ಮತ್ತು ನಮ್ಮ ರಾಜ್ಯದ ಕಾನೂನಿಗೆ ಗೌರವ ಹಾಗೂ ಸಹಬಾಳ್ವೆ ನಡೆಸುವ ಕುರಿತು ತಿಳುವಳಿಕೆ ನೀಡಲಾಗಿದೆ.

ಇ) ಇತ್ತೀಚೆಗೆ ಬೆಂಗಳೂರಿನ ಗಿಫ್ಟ್ ಸೆಂಟರ್‌ಗಳಲ್ಲಿ ಅಪ್ರಾಪ್ತ ಮಕ್ಕಳಿಗೂ ನಿಷೇದಿತ ಇ-ಸಿಗರೇಟ್‌ಗಳು ಸಲೀಸಾಗಿ ದೊರಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಪ್ರಕರಣಗಳು ದಾಖಲಾಗಿದ್ದು, ಈ ಪ್ರಕರಣಗಳು ಯಾವ ಹಂತದಲ್ಲಿವೆ? (ವಿವರ ನೀಡುವುದು)

ಬೆಂಗಳೂರಿನ ಗಿಫ್ಟ್ ಸೆಂಟರ್‌ಗಳಲ್ಲಿ ಅಪ್ರಾಪ್ತ ಮಕ್ಕಳಿಗೂ ನಿಷೇಧಿತ ಇ-ಸಿಗರೇಟ್‌ಗಳು ದೊರಕುತ್ತಿರುವುದು ಗಮನಕ್ಕೆ ಬಂದಿದ್ದು, ಈ ಕುರಿತಂತೆ ಮಾಹಿತಿ ಸಂಗ್ರಹಿಸಿ, ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಿಷೇಧಿತ ಇ-ಸಿಗರೇಟ್ ಮಾರಾಟಗಾರರು ಹಾಗೂ ಸಂಗ್ರಹಿಸಲಾಗಿದ್ದ ದಸ್ತಾನು ಮೇಲೆ ದಾಳಿ ನಡೆಸಿ ಪ್ರಕರಣಗಳನ್ನು ದಾಖಲಿಸಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ದಾಖಲಾಗಿರುವ ಪ್ರಕರಣಗಳ ಅಂಕಿ ಅಂಶಗಳ ವಿವರಗಳನ್ನು ಈ ಕೆಳಕಂಡಂತಿದೆ.

| ವರ್ಷ | ದಾಖಲಿಸಿರುವ ಪ್ರಕರಣಗಳ ಅಂಕಿ-ಅಂಶಗಳ ವಿವರ |
|---|---|
| 2021 | 1 |
| 2022 | 16 |
| 2023 | 48 |

ಮೇಲ್ಕಂಡ ಪ್ರಕರಣಗಳ ಸಂಪೂರ್ಣ ವಿವರಗಳನ್ನು **ಅನುಬಂಧ-2**ರಲ್ಲಿ ಸಲ್ಲಿಸಲಾಗಿದೆ.

ಒಇ 11 ಪಿಎನ್‌ಡಿ 2024(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು